" ELECTION URGENT "

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ.8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-52.

**ಸಂಖ್ಯೆ: ರಾಚುಆ.30.ಇಯುಬಿ.2018, ದಿನಾಂಕ: 18-08-2018**

## ಪತ್ರಿಕಾ ಪ್ರಕಟಣೆ

**ವಿಷಯ: ಪ್ರಕೃತಿ ವಿಕೋಪದಿಂದಾಗಿ ಕೊಡಗು ಜಿಲ್ಲೆಯ ಕುಶಾಲನಗರ, ಸೋಮವಾರಪೇಟೆ ಮತ್ತು ವೀರಾಜಪೇಟೆ ಪಟ್ಟಣ ಪಂಚಾಯಿತಿಗಳ ಚುನಾವಣೆಯನ್ನು ತಡೆಹಿಡಿದಿರುವ ಬಗ್ಗೆ.**

ರಾಜ್ಯ ಚುನಾವಣಾ ಆಯೋಗವು ಒಟ್ಟು 105 ನಗರ ಸ್ಥಳೀಯ ಸಂಸ್ಥೆಗಳಿಗೆ ದಿನಾಂಕ: 02.08.2018 ರಂದು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿ, ಸಾರ್ವತ್ರಿಕ ಚುನಾವಣೆಯನ್ನು ನಡೆಸಲು ಆದೇಶಿಸಲಾಗಿತ್ತು. ಕೊಡಗು ಜಿಲ್ಲೆಯಾದ್ಯಂತ ಬಾರಿ ಮಳೆ ಸುರಿಯುತ್ತಿದ್ದು ಚುನಾವಣೆಯನ್ನು ಮುಂದೂಡುವಂತೆ ಜಿಲ್ಲಾಧಿಕಾರಿಗಳು ಕೋರಿರುತ್ತಾರೆ. ಜಿಲ್ಲಾಧಿಕಾರಿಗಳ ಕೋರಿಕೆಯಂತೆ ಕೊಡಗು ಜಿಲ್ಲೆಯ ಕುಶಾಲನಗರ, ಸೋಮವಾರಪೇಟೆ ಮತ್ತು ವೀರಾಜಪೇಟೆ ಪಟ್ಟಣ ಪಂಚಾಯಿತಿಗಳ ಸಾರ್ವತ್ರಿಕ ಚುನಾವಣೆಯನ್ನು ತತ್‌ಕ್ಷಣದಿಂದ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ದಿನಾಂಕ: 02.08.2018 ರಿಂದ ದಿನಾಂಕ: 16.08.2018ರ ವರೆಗಿನ ಚುನಾವಣಾ ಪ್ರಕ್ರಿಯೆಗಳಿಗೆ ಯಾವುದೇ ಬಾದಕವಿರುವುದಿಲ್ಲ.

ಈ ಬಗ್ಗೆ ಶ್ರವಣ ಮತ್ತು ದೃಶ್ಯ ಮಾದ್ಯಮದಲ್ಲಿ ವ್ಯಾಪಕ ಪ್ರಚಾರ ನೀಡಿ ಸಹಕರಿಸುವಂತೆ ಕೋರಲಾಗಿದೆ.

ಅರ್ಚನ ಎಂ.ಎಸ್ 18/8/2018

(ಅರ್ಚನ ಎಂ.ಎಸ್)

ಅಧೀನ ಕಾರ್ಯದರ್ಶಿ,

ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

**ಇವರಿಗೆ:**

1. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ವ್ಯವಸ್ಥಾಪಕರು______ದಿನಪತ್ರಿಕೆ/ ದೂರ ದರ್ಶನ ಪ್ರಸಾರ ವಾಹಿನಿಗಳಿಗೆ ಕಳುಹಿಸಿ, ಸುದ್ದಿ ಮಾಧ್ಯಮದಲ್ಲಿ ಪ್ರಕಟಿಸುವಂತೆ ಕೋರಿದೆ.

**ಪ್ರತಿಗಳು ಮಾಹಿತಿಗಾಗಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ.
4. ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ.